# All India Radio: Bangalore
# Regional Bulletin In Kannada
# 02.03.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

***************

ಮುಖ್ಯಾಂಶಗಳು

೧. ನಾಳೆಯಿಂದ ರಾಜ್ಯ ವಿಧಾನಮಂಡಲದ ಬಜೆಟ್ ಅಧಿವೇಶನ

೨. ಮೈಸೂರಿನಲ್ಲಿ ೧೫೦ ಎಕರೆ ಸ್ಥಳದಲ್ಲಿ ವಿಶ್ವದರ್ಜೆಯ ಫಿಲ್ಮ್ ಸಿಟಿ ನಿರ್ಮಾಣ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಅನ್ನಭಾಗ್ಯ ಯೋಜನೆಯಡಿ ಫೆಬ್ರವರಿ ತಿಂಗಳ ಬಾಕಿ ಪಡಿತರ ಮಾರ್ಚ್‌ನಲ್ಲಿ ವಿತರಣೆ - ಸಚಿವ ಕೆ.ಎಚ್.ಮುನಿಯಪ್ಪ

೪. ಚಿಕ್ಕಮಗಳೂರಿನ ಬಲ್ಲಾಳ ರಾಯನದುರ್ಗ ಅರಣ್ಯದಲ್ಲಿ ಕಾಡ್ಗಿಚ್ಚು; ೨೦ಕ್ಕೂ ಹೆಚ್ಚು ಎಕರೆ ಅರಣ್ಯ ನಾಶ

***************

ನಾಳೆಯಿಂದ ಇದೇ ೨೧ ರವರೆಗೆ ರಾಜ್ಯ ವಿಧಾನ ಮಂಡಲದ ಬಜೆಟ್ ಅಧಿವೇಶನ ನಡೆಯಲಿದೆ.

ನಾಳೆ ರಾಜ್ಯಪಾಲರು ಜಂಟಿ ಸದನ ಉದ್ದೇಶಿಸಿ ಮಾತನಾಡಲಿದ್ದು, ನಂತರ ಮೂರು ದಿನ ರಾಜ್ಯಪಾಲರ ಭಾಷಣದ ಮೇಲೆ ಚರ್ಚೆ ನಡೆಯಲಿದೆ. ಮಾರ್ಚ್ ೭ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಮಂಡನೆ ಮಾಡಲಿದ್ದಾರೆ.

***************

ರಾಜ್ಯ ವಿಧಾನ ಪರಿ?ತ್ತಿನ, ೧೫೫ನೇ ಅಧಿವೇಶನದ ನಾಳೆಯಿಂದ ಈ ತಿಂಗಳ ೨೧ರ ವರೆಗೆ, ಒಟ್ಟು ೧೫ ದಿನಗಳ ಕಾಲ ನಡೆಯಲಿದೆ ಎಂದು ವಿಧಾನಪರಿ?ತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರು ಉಭಯ ಸದನಗಳನ್ನು ಉದ್ದೇಶಿಸಿ, ನಾಳೆ ಭಾಷಣ ಮಾಡಲಿದ್ದಾರೆ. ಪ್ರಸಕ್ತ ಅಧಿವೇಶನಕ್ಕೆ ಈವರೆಗೆ ಒಟ್ಟು ೬೯೩ ಪ್ರಶ್ನೆಗಳನ್ನು ಸ್ವೀಕರಿಸಲಾಗಿದೆ. ಆ ಪೈಕಿ, ೪೩೧ ಚುಕ್ಕೆ ಗುರುತಿನ ಹಾಗೂ ೨೬೨ ಚುಕ್ಕೆ ರಹಿತ ಪ್ರಶ್ನೆಗಳಾಗಿವೆ. ನಿಯಮ ೭೨ರ ಅಡಿಯಲ್ಲಿ ೫೭ ಸೂಚನೆಗಳು ಹಾಗೂ ನಿಯಮ ೩೩೦ರ ಅಡಿ, ೨೪ ಸೂಚನೆಗಳನ್ನು ಸ್ವೀಕರಿಸಲಾಗಿದೆ ಎಂದು ಮಾಹಿತಿ ನೀಡಿದರು.

ಈ ಬಾರಿ ಅಧಿವೇಶನದಲ್ಲಿ, ಹೊಸ ವಿ?ಯಗಳ ಚರ್ಚೆಗೆ ಅವಕಾಶ ನೀಡಲಾಗಿದೆ. ಹದಿಹರೆಯದ ಮಕ್ಕಳು ಅನುಭವಿಸುತ್ತಿರುವ ಸವಾಲುಗಳು, ಪ್ರತಿಸ್ಪಂದನೆಗಳು ಮತ್ತು ಪರಿಹಾರೋಪಾಯಗಳ' ಕುರಿತು ಚರ್ಚಿಸಲು ಹಾಗೂ ಮಕ್ಕಳು ಮತ್ತು ಯುವ ಪೀಳಿಗೆ, ಮಾದಕ ದ್ರವ್ಯಗಳ ವ್ಯಸನಿಗಳಾಗುತ್ತಿರುವುದನ್ನು ತಡೆಗಟ್ಟುವ ಕುರಿತು ಚರ್ಚಿಸಲು, ವಿಷಯವನ್ನು ಕಲಾಪ ಸಮಿತಿಗೆ ಮಂಡಿಸಲಾಗಿದೆ ಎಂದು ವಿಧಾನಪರಿ?ತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

***************

ವಿಶ್ವದರ್ಜೆಯ ಫಿಲ್ಮ್ ಸಿಟಿಯನ್ನು ಮೈಸೂರಿನಲ್ಲಿ ನಿರ್ಮಿಸಲಾಗುವುದು. ಇದಕ್ಕಾಗಿ ಈಗಾಗಲೇ ೧೫೦ ಎಕರೆ ಜಾಗವನ್ನು ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಅವರು, ತಂತ್ರಜ್ಞಾನದ ಜೊತೆಗೆ ಮಾನವೀಯ ಮೌಲ್ಯಗಳನ್ನು ಬೆಸೆಯುವ ಸಿನಿಮಾಗಳನ್ನು ವಿಶ್ವದರ್ಜೆಯ ಗುಣಮಟ್ಟದಲ್ಲಿ ಮೈಸೂರಿನ ಫಿಲ್ಮ್ ಸಿಟಿಯಲ್ಲಿ ನಿರ್ಮಾಣ ಆಗಬೇಕು. ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವು ವಿಶ್ವ ಸಮುದಾಯದ ಸಂಸ್ಕೃತಿಯ ಪ್ರತಿಬಿಂಬ. ಇದನ್ನು ವೀಕ್ಷಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದ್ದಾರೆ.

ಅಸಹನೆ ಹೆಚ್ಚುತ್ತಿರುವುದರಿಂದ ಸಮಾಜದಲ್ಲಿ ಅಸಂತೋಷ ಹೆಚ್ಚುತ್ತಿದೆ. ಸಂಪತ್ತಿನ ಅಸಮಾನ ಹಂಚಿಕೆ ಈ ಅಸಂತೋಷಕ್ಕೆ ಕಾರಣ. ದೇಶದ ಶೇಖಡ ೧ ರಷ್ಟು ಜನರ ಕೈಯಲ್ಲಿ ದೇಶದ ಶೇಖಡ ೫೦ ರಷ್ಟು ಸಂಪತ್ತು ಸೇರಿಕೊಂಡಿದೆ. ಇದಕ್ಕೆ ಕಲಾ ಮಾಧ್ಯಮ ಆಗಿರುವ ಸಿನಿಮಾಗಳು ಪರಿಹಾರ ಹುಡುಕಬೇಕು. ಸಮಾಜವನ್ನು ಕಲಾ ಮಾಧ್ಯಮದ ಮೂಲಕ ಬೆಸೆಯಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಶಯ ವ್ಯಕ್ತಪಡಿಸಿದ್ದಾರೆ.

ಮೌಢ್ಯಗಳನ್ನು ಬಿತ್ತುವ, ಸಂವಿಧಾನದ ಮೌಲ್ಯಗಳಿಗೆ ವಿರುದ್ಧವಾದ ಸಿನಿಮಾಗಳು ಸಮಾಜಕ್ಕೆ ಒಳ್ಳೆಯದಲ್ಲ. ಸಿನಿಮಾಗಳು ಮೌಢ್ಯಗಳನ್ನು ಬಿತ್ತುವುದಕ್ಕೆ ಹೋಗಬಾರದು ಎಂದರು.

ಕೃತಕ ಬುದ್ಧಿಮತ್ತೆವರೆಗೂ ತಂತ್ರಜ್ಞಾನ ಬೆಳೆದು ಬಂದಿದೆ. ಜನರ ಬದುಕನ್ನು ಪ್ರತಿಬಿಂಬಿಸುವ, ಅವರ ತಳಮಳಗಳಿಗೆ ಪರಿಹಾರ ಹುಡುಕುವ ಸಿನಿಮಾಗಳು ಬಂದಾಗ ಅಂತಹ ಸಿನಿಮಾಗಳು ಶಾಶ್ವತವಾಗಿ ಸಮಾಜದಲ್ಲಿ ಉಳಿಯುತ್ತವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

****************

ಅನ್ನಭಾಗ್ಯ ಯೋಜನೆ ಅಡಿ ಇನ್ನು ಮುಂದೆ ಹಣದ ಬದಲಾಗಿ ೫ ಕೆ.ಜಿ ಅಕ್ಕಿ ನೀಡಲಾಗುವುದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ ಹೇಳಿದ್ದಾರೆ.

ಈ ಕುರಿತು ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಫೆಬ್ರವರಿ ತಿಂಗಳಿನ ಅಕ್ಕಿ ಸೇರಿಸಿ, ಮಾರ್ಚ್ ತಿಂಗಳಲ್ಲಿ ಅಕ್ಕಿ ನೀಡಲು ನಿರ್ಧಾರ ಮಾಡಲಾಗಿದೆ. ಹಣದ ಬದಲಾಗಿ ೫ ಕೆಜಿ ಅಕ್ಕಿಯನ್ನು ನೀಡಲಾಗುವುದು. ಪ್ರತಿ ತಿಂಗಳು ೨.೧೦ ಲಕ್ಷ ಮೆಟ್ರಿಕ್ ಟನ್ ಅಕ್ಕಿ ಬೇಕಾಗುತ್ತದೆ ಎಂದರು.

ಕಳೆದ ಸರ್ಕಾರದ ಸಮಯದಲ್ಲಿ ೨ ಲಕ್ಷದ ೯೫ ಸಾವಿರ ಕಾರ್ಡ್‌ಗಳು ಪರಿಷ್ಕರಣೆಯಲ್ಲಿ ಇದ್ದವು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಅಧಿಕಾರಿಗಳಿಗೆ ಅದನ್ನು ಪರಿಷ್ಕರಣೆ ಮಾಡಲು ತಿಳಿಸಲಾಯಿತು. ಅದರಲ್ಲಿ ೧ ಲಕ್ಷದ ೭೫ ಸಾವಿರ ಕಾರ್ಡ್‌ಗಳನ್ನು ಬಿಪಿಎಲ್‌ಗೆ ಹಾಗೂ ಉಳಿದ ಕಾರ್ಡುಗಳನ್ನು ಎಪಿಎಲ್‌ಗೆ ಸೇರಿಸಲಾಗಿದೆ ಎಂದು ಅವರು ತಿಳಿಸಿದರು.

ಧ್ವನಿ: ಸಚಿವ ಕೆ.ಎಚ್.ಮುನಿಯಪ್ಪ

ಇದೇ ೭ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ೧೭ನೇ ಬಜೆಟ್ ಮಂಡನೆ ಮಾಡಲಿದ್ದಾರೆ. ಬಜೆಟ್‌ನಲ್ಲಿ ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿಯ ಯೋಜನೆಗಳು ಅನುಷ್ಠಾನಗೊಳ್ಳಲಿವೆ. ಇದಕ್ಕೆ ಯಾವುದೇ ಹಣದ ಕೊರತೆ ಇಲ್ಲ ಎಂದು ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು.

****************

ಚಿಕ್ಕಮಗಳೂರು ಜಿಲ್ಲೆಯ ಕುದುರೆಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯ ಬಲ್ಲಾಳ ರಾಯನ ದುರ್ಗ ಅರಣ್ಯದಲ್ಲಿ ನಿನ್ನೆ ರಾತ್ರಿಯಿಂದ ಕಾಡ್ಗಿಚ್ಚು ಉಂಟಾಗಿದ್ದು, ಸಾಕಷ್ಟು ಪ್ರಮಾಣದಲ್ಲಿ ಅರಣ್ಯ ನಾಶ ಉಂಟಾಗಿದೆ ಎಂದು ಅರಣ್ಯ ಅಧಿಕಾರಿಗಳು ತಿಳಿಸಿದ್ದಾರೆ.

೨೦ಕ್ಕೂ ಹೆಚ್ಚು ಎಕರೆ ಅರಣ್ಯ ಪ್ರದೇಶಕ್ಕೆ ಬೆಂಕಿ ವ್ಯಾಪಿಸಿದ್ದು, ಎತ್ತರದ ಬೆಟ್ಟ ಪ್ರದೇಶ ಹಾಗು ರಸ್ತೆ ಸೌಲಭ್ಯವಿಲ್ಲದ ಸ್ಥಳವಾಗಿರುವ ಕಾರಣ, ಅರಣ್ಯ ಇಲಾಖೆ ಹಾಗೂ ಅಗ್ನಿ ಶಾಮಕದಳ ಸಿಬ್ಬಂದಿ ಸ್ಥಳಕ್ಕೆ ತೆರಳಿ, ಬೆಂಕಿ ನಂದಿಸುವುದಕ್ಕೆ ಸಮಸ್ಯೆ ಆಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

ಕಳೆದ ಒಂದು ತಿಂಗಳ ಅವಧಿಯಲ್ಲಿ ಜಿಲ್ಲೆಯ ಚಾರ್ಮಾಡಿ ಘಾಟ್, ಬಿದಿರುತಳ, ಮುಳ್ಳಯ್ಯನಗಿರಿ ಸೇರಿ ಹಲವು ಅರಣ್ಯ ಭಾಗಗಳಲ್ಲಿ ಕಾಡ್ಗಿಚ್ಚು ಉಂಟಾಗಿ ಅಪಾರ ಪ್ರಮಾಣದಲ್ಲಿ ಅರಣ್ಯ ನಾಶವಾಗಿದೆ.

***************

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೋಳಿಗಳು ಅನುಮಾಸ್ಪದವಾಗಿ ಸಾವನ್ನಪ್ಪಿದ್ದು, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಯಾವುದೇ ಪಕ್ಷಿಗಳು ಅಥವಾ ಕೋಳಿಗಳು ಅನುಮಾನಾಸ್ಪದವಾಗಿ, ಅಸಹಜವಾಗಿ ಇಲ್ಲವೇ ಇದ್ದಕ್ಕಿದ್ದಂತೆ ಮೃತಪಟ್ಟರೆ, ಸಮೀಪದ ಪಶು ಇಲಾಖೆಗೆ ಮಾಹಿತಿ ನೀಡಬೇಕು ಎಂದು ಹೇಳಿದ್ದಾರೆ.

ಆರೋಗ್ಯ ಇಲಾಖೆಯ ಸಿಬ್ಬಂದಿ ಗ್ರಾಮಗಳಿಗೆ ತೆರಳಿ, ಸಾರ್ವಜನಿಕರಿಗೆ ಹಕ್ಕಿ ಜ್ವರದ ಬಗ್ಗೆ ಅರಿವು ಮೂಡಿಸುತ್ತಿದ್ದಾರೆ. ಇನ್ನೊಂದೆಡೆ, ಕೋಳಿ ಸಾಕಾಣಿಕೆ ಕೇಂದ್ರಗಳನ್ನು ಗುರುತಿಸಿ, ಮಾಲೀಕರು ಮತ್ತು ಸಿಬ್ಬಂದಿಗಳಿಗೆ ಅಗತ್ಯ ಮಾಹಿತಿಯನ್ನು ನೀಡಲು ಕ್ರಮವಹಿಸಲಾಗಿದೆ. ಪಶು ವೈದ್ಯಕೀಯ ಇಲಾಖೆ ಸಿಬ್ಬಂದಿ, ಪೌಲ್ಟ್ರಿ ಫಾರಂಗಳಿಗೆ ಭೇಟಿ ನೀಡಿ, ಪರಿಶೀಲಿಸಿ ಅರಿವು ಮೂಡಿಸುತ್ತಿದ್ದಾರೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ.

***************

ದೇಶಾದ್ಯಂತ ಇಂದಿನಿಂದ ರಂಜಾನ್ ಹಬ್ಬವನ್ನು ಸಡಗರ-ಸಂಭ್ರಮದಿಂದ ಆಚರಿಸಲಾಗುತ್ತಿದ್ದು, ರಂಜಾನ್ ತಿಂಗಳ ಉಪವಾಸ ವ್ರತಾಚರಣೆಯನ್ನು, ಮುಸ್ಲಿಮರು ಇಂದಿನಿಂದ ಆರಂಭಿಸಿದ್ದಾರೆ.

ರಂಜಾನ್ ತಿಂಗಳಲ್ಲಿ, ತ್ರವೀಹ್ ನಮಾಜ್-ಪ್ರಾರ್ಥನೆ, ರೋಝಾ-ಉಪವಾಸ, ಹಾಗೂ ಜಕಾತ್-ದಾನಕ್ಕೆ ಹೆಚ್ಚು ಪ್ರಾಮುಖ್ಯವಿದೆ. ನೆಮ್ಮದಿ ಹಾಗೂ ಸಾಮರಸ್ಯದ ಬದುಕಿಗಾಗಿ ಪ್ರಾರ್ಥಿಸಲಾಗುತ್ತದೆ. ಈ ತಿಂಗಳ ಅಂತ್ಯದಲ್ಲಿ ಈದ್ ಉಲ್ ಫಿತರ್ ಅನ್ನು ಆಚರಿಸಲಾಗುತ್ತದೆ.

ರಂಜಾನ್ ಮಾಸದ ಆರಂಭದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ಶುಭಾಶಯ ಕೋರಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್ ಮಾಡಿರುವ ಪ್ರಧಾನಿ ನರೇಂದ್ರ ಮೋದಿ, ಈ ಪವಿತ್ರ ತಿಂಗಳು, ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆಯನ್ನು ತರಲಿ ಎಂದು ಹಾರೈಸಿದ್ದಾರೆ.

ರಂಜಾನ್ ತಿಂಗಳು ಪ್ರತಿಬಿಂಬ, ಕೃತಜ್ಞತೆ ಮತ್ತು ಭಕ್ತಿಯನ್ನು ಪ್ರತಿನಿಧಿಸುತ್ತದೆ ಮತ್ತು ದೇಶವಾಸಿಗಳಿಗೆ ಸಹಾನುಭೂತಿ, ದಯೆ ಮತ್ತು ಸೇವೆಯ ಮೌಲ್ಯಗಳನ್ನು ನೆನಪಿಸುತ್ತದೆ ಎಂದು ಪ್ರಧಾನಿ ಪ್ರತಿಪಾದಿಸಿದರು.

****************

ಕೃ? ಅಚ್ಚುಕಟ್ಟು ಪ್ರದೇಶದ ನೀರಾವರಿ ಪ್ರದೇಶದಲ್ಲಿ ಅಧಿಕ ನೀರಿನ ಬಳಕೆಯಿಂದ ಭೂಮಿ ಸಾರ ಕಡಿಮೆಯಾಗಿದೆ. ಕೃಷಿಯಲ್ಲಿ ಆದಾಯಕ್ಕಿಂತ ಖರ್ಚು ಹೆಚ್ಚಾಗಿದೆ. ಇವೆಲ್ಲದರ ನಡುವೆ ಒಣ ಬೇಸಾಯದಲ್ಲಿ ಬಿಳಿ ಜೋಳವನ್ನು ಬಿತ್ತನೆ ಮಾಡಿ ಅಳಿವಿನ ಅಂಚಿನಲ್ಲಿರುವ ಬಿತ್ತನೆ ಬೀಜ ಸಂತತಿ ಉಳಿವಿಗೆ ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ಮುಡಬೂಳ ಗ್ರಾಮದ ರೈತ ಸಿದ್ರಾಮಪ್ಪ ಅಂಗಡಿ ಮುಂದಾಗಿದ್ದಾರೆ.

ಈ ಕುರಿತು ಆಕಾಶವಾಣಿಯೊಂದಿಗೆ ತಮ್ಮ ಅಭಿಪ್ರಾಯ ಹಚ್ಚಿಕೊಂಡಿದ್ದಾರೆ.

ಧ್ವನಿ: ರೈತ ಸಿದ್ರಾಮಪ್ಪ ಅಂಗಡಿ

****************

ಹಂಪಿಯು ಸಮಸ್ತ ಕನ್ನಡಿಗರ ಹೆಮ್ಮೆಯ ಸ್ಥಳವಾಗಿದೆ. ಇದರ ವಾರಸುದಾರರು ಕನ್ನಡಿಗರು ಎಂಬ ದೃಷ್ಟಿಯಿಂದ ಹಂಪಿ ಉತ್ಸವವನ್ನು ಅಚ್ಚುಕಟ್ಟಾಗಿ ಆಯೋಜಿಸಲಾಗಿದೆ ಎಂದು ರಾಜ್ಯ ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ ಪಾಟೀಲ್ ಹೇಳಿದ್ದಾರೆ.

ಹಂಪಿ ಉತ್ಸವದ ಅಂಗವಾಗಿ ಕುಸ್ತಿ ಅಖಾಡದಲ್ಲಿ, ಹಂಪಿ ಕಿಶೋರ, ಹಂಪಿ ಕುಮಾರ, ಹಂಪಿ ಕೇಸರಿ ಹಾಗೂ ಹಂಪಿ ಕಂಠೀರವ ವಿಭಾಗಗಳಲ್ಲಿ ನಡೆದ ರಾಜ್ಯ ಮಟ್ಟದ ಪಾಯಿಂಟ್ ಕುಸ್ತಿಯಲ್ಲಿ ೩೧ ಪುರುಷರು, ೨೫ ಮಹಿಳೆಯರು, ಜಿಲ್ಲಾ ಮಟ್ಟದ ಚಿತ್ ಕುಸ್ತಿ ವಿಭಾಗದಲ್ಲಿ ೩೧ ಜನ ಸ್ಪರ್ಧಿಗಳು ಭಾಗವಹಿಸಿದ್ದರು.

****************

ದಾವಣಗೆರೆ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಅನಧಿಕೃತ ಸ್ವತ್ತುಗಳಿಗೆ ಇ-ಖಾತಾ ನೀಡುವ ಸಂಬಂಧ ಕಾಯ್ದೆ ಮತ್ತು ನಿಯಮಗಳನ್ನು ತಿದ್ದುಪಡಿ ಮಾಡಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

****************

ಕೈಗಾ ಅಣು ವಿದ್ಯುತ್ ಸ್ಥಾವರದಲ್ಲಿ ಇದೇ ೫ರಂದು ನಡೆಯುವ ಅಣಕು ಕಾರ್ಯಾಚರಣೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು, ಯಾವುದೇ ಲೋಪಗಳಿಗೆ ಆಸ್ಪದ ನೀಡದೆ, ಅಣಕು ಕಾರ್ಯಾಚರಣೆ ಯಶಸ್ವಿಗೊಳಿಸುವಂತೆ ಉತ್ತರ ಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಸೂಚನೆ ನೀಡಿದ್ದಾರೆ.

ಕಾರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೈಗಾ ಅಣು ವಿದ್ಯುತ್ ಸ್ಥಾವರದಲ್ಲಿ ವಿಪತ್ತು ಸಂಭವಿಸಿದಲ್ಲಿ ಅದನ್ನು ಎದುರಿಸುವ ಕುರಿತಂತೆ ಇದೇ ೫ ರಂದು ಬೆಳಗ್ಗೆ ೯ ಗಂಟೆಗೆ ಅಣಕು ಕಾರ್ಯಾಚರಣೆ ನಡೆಯಲಿದೆ ಎಂದರು.

*********ಮುಕ್ತಾಯ*******